# ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ರಾಮೋಜಿಗೌಡ ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ಪ್ರಶ್ನೆಗೆ ಮಾನ್ಯ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಹೇಳಿಕೆ

## ವಿಷಯ

ವಿಜಯವಾಣಿ ದಿನಪತ್ರಿಕೆಯಲ್ಲಿ ಪ್ರಕಟಗೊಂಡಿರುವಂತೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿದ್ಯಾರ್ಥಿಗಳು, ಉದ್ಯೋಗ ಹುಡುಕುತ್ತಿರುವ ಉದ್ಯೋಗಾಂಕ್ಷಿಗಳು ಜಾಬ್ ಕಾರ್ಡ್ (ಎಂಪ್ಲಾಯ್‌ಮೆಂಟ್ ಕಾರ್ಡ್) ಮಾಡಿಸಲು ಬೆಂಗಳೂರನ್ನೇ ಅವಲಂಬಿಸಬೇಕಾಗಿರುತ್ತದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಜಿಲ್ಲಾಡಳಿತ ಭವನ ನಿರ್ಮಾಣಗೊಂಡು 8 ವರ್ಷಗಳೇ ಕಳೆಯುತ್ತಾ ಬಂದಿದ್ದು, ಹಲವು ಇಲಾಖೆಗಳು ಜಿಲ್ಲಾಡಳಿತ ಭವನದಲ್ಲಿ ಕಾರ್ಯನಿರ್ವಹಿಸುತ್ತಿವೆ. ಕೌಶಲ್ಯಾಭಿವೃದ್ಧಿ ಮತ್ತು ಜೀವನೋಪಾಯ ಇಲಾಖೆಯೂ ಇದೇ ಜಿಲ್ಲಾಡಳಿತ ಭವನದಲ್ಲಿ ಕಾರ್ಯನಿರ್ವಹಿಸುತ್ತಿದೆ. ಆದರೆ, ಉದ್ಯೋಗ ವಿನಿಮಯ ಕೇಂದ್ರ ಇಲ್ಲದಿರುವುದೂ ಪದವಿ ಮುಗಿಸಿರುವ ವಿದ್ಯಾರ್ಥಿಗಳ ಪರದಾಟಕ್ಕೆ ಕಾರಣವಾಗಿದೆ. ಜಿಲ್ಲೆಯಲ್ಲಿ ಸಾಕಷ್ಟು ಕೈಗಾರಿಕೆಗಳು ತಲೆ ಎತ್ತುತ್ತಿವೆ. ಅದೇ ರೀತಿ ಸಾವಿರಾರು ಉದ್ಯೋಗಾವಕಾಶಗಳು ಹೆಚ್ಚುತ್ತಿವೆ. ಆದರೆ ಜಿಲ್ಲೆಯ ಉದ್ಯೋಗಾಕಾಂಕ್ಷಿಗಳಿಗೆ ಉದ್ಯೋಗ ಅವಕಾಶಗಳ ಬಗ್ಗೆ ಸರಿಯಾದ ಮಾರ್ಗದರ್ಶನದ ಕೊರತೆ ಎದುರಾಗಿದೆ. ಅಭ್ಯರ್ಥಿಗಳು ಯಾರನ್ನು ಸಂಪರ್ಕಿಸಿ ಉದ್ಯೋಗ ಬಗ್ಗೆ ಮಾಹಿತಿ ಪಡೆದುಕೊಳ್ಳಬೇಕು ಎಂಬ ಗೊಂದಲಕ್ಕೆ ಸಿಲುಕಿ, ಮಾರ್ಗದರ್ಶನ ಕೊರತೆ ಎದುರಿಸುತ್ತಿರುತ್ತಾರೆ. ಮುಖ್ಯವಾಗಿ ಮಾಹಿತಿ ಕೊರತೆಯಿಂದ ಅನೇಕ ಉದ್ಯೋಗಾಕಾಂಕ್ಷಿಗಳಿಗೆ ಉದ್ಯೋಗ ಭಾಗ್ಯವಿಲ್ಲದಂತಾಗಿದೆ. ಜಿಲ್ಲೆಯಲ್ಲಿನ ಕೈಗಾರಿಕಾ ವಲಯಗಳಲ್ಲಿ ಸಾಕಷ್ಟು ಉದ್ಯೋಗವಿದ್ದರೂ ಬೆಂಗಳೂರಿಗೆ ಹೋಗಿ ಬರುವ ಅನಿವಾರ್ಯತೆ ನಿರ್ಮಾಣವಾಗಿದೆ. ಆದ್ದರಿಂದ ಕೂಡಲೇ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಉದ್ಯೋಗ ವಿನಿಮಯ ಕೇಂದ್ರ ಸ್ಥಾಪಿಸಿ ಜಾಬ್ ಕಾರ್ಡ್ ಮಾಡಿಸುವ ಪ್ರಕ್ರಿಯೆಗೆ ಚಾಲನೆ ನೀಡಬೇಕು ಎಂಬುದು ಜಿಲ್ಲೆಯ ಸಾವಿರಾರು ಅಭ್ಯರ್ಥಿಗಳ ಒತ್ತಾಯವಾಗಿದೆ. ಆದ್ದರಿಂದ ಈ ಸಂಬಂಧ ಸರ್ಕಾರವು ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಶೂನ್ಯ ವೇಳೆಯಲ್ಲಿ ಚರ್ಚಿಸಬಯಸುತ್ತೇನೆ.

## ಹೇಳಿಕೆ

ರಾಜ್ಯದಲ್ಲಿ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯ ವತಿಯಿಂದ ನಿರುದ್ಯೋಗಿ ಅಭ್ಯರ್ಥಿಗಳ ಉದ್ಯೋಗ ಮಾರ್ಗದರ್ಶನ ಹಾಗೂ ನೆರವಿಗಾಗಿ ಒಟ್ಟು 40 ಉದ್ಯೋಗ ವಿನಿಮಯ ಕಚೇರಿಗಳು ಸ್ಥಾಪಿತವಾಗಿದ್ದು, ವಿವರಗಳನ್ನು **ಅನುಬಂಧ**ದಲ್ಲಿ ನೀಡಿದೆ. ಬೆಂಗಳೂರು ನಗರದಲ್ಲಿ ಒಟ್ಟು 07 ಉದ್ಯೋಗ ವಿನಿಮಯ ಕಚೇರಿಗಳು ಕಾರ್ಯನಿರ್ವಹಿಸುತ್ತಿದ್ದು, ಈ ಎಲ್ಲಾ ಉದ್ಯೋಗ ವಿನಿಮಯ ಕಚೇರಿಗಳು ಬೆಂಗಳೂರಿನ ಪೀಣ್ಯ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಸಿ.ಓ.ಇ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿವೆ. ಉಳಿದಂತೆ ಬೆಂಗಳೂರು ಗ್ರಾಮಾಂತರ ಅಭ್ಯರ್ಥಿಗಳ ಸೇವೆಗೆ ಪ್ರತ್ಯೇಕವಾಗಿ ನಿರ್ವಹಿಸುವಂತಾಗುವ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯು ರಚನೆಯಾಗಿರುವುದಿಲ್ಲ. ಆದಾಗ್ಯೂ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಉದ್ಯೋಗ ವಿನಿಮಯ ಕೇಂದ್ರ ಸ್ಥಾಪಿಸುವ ಕುರಿತು ಪ್ರಸ್ತಾವನೆ ಸ್ವೀಕೃತವಾದಲ್ಲಿ ನಿಯಮಾನುಸಾರ ಪರಿಶೀಲಿಸಿ ಕ್ರಮವಹಿಸಲಾಗುವುದು.

**ಕೌಉಜೀಇ 88 ಕೈತಪ್ರ 2025**

(ಡಾ. ಶರಣಪ್ರಕಾಶ್ ರುದ್ರಪ್ಪ ಪಾಟೀಲ್)
ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು.

**ಶೂನ್ಯ ವೇಳೆಯ ಪ್ರಸ್ತಾಪಕ್ಕೆ ಅನುಬಂಧ**

**ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯ ಉದ್ಯೋಗ ವಿಭಾಗದ ಅಧೀನದಲ್ಲಿ ಬರುವ ಉದ್ಯೋಗ ವಿನಿಮಯ ಕೇಂದ್ರಗಳು**

| ಕ್ರ. ಸಂ | ಕಚೇರಿ ವಿಳಾಸ |
|---|---|
| 1. | ಉಪ ಪ್ರಾದೇಶಿಕ ಉದ್ಯೋಗ ವಿನಿಮಯ ಕೇಂದ್ರ, **ಬೆಂಗಳೂರು.** |
| 2. | ವಿಶಿಷ್ಟ ವೃತ್ತಿ ಮತ್ತು ಕಾರ್ಯನಿರ್ವಾಹಕ ಉದ್ಯೋಗ ವಿನಿಮಯ ಕೇಂದ್ರ, **ಬೆಂಗಳೂರು.** |
| 3. | ಅಂಗವಿಕಲರ ವಿಶೇಷ ಉದ್ಯೋಗ ವಿನಿಮಯ ಕೇಂದ್ರ,**ಬೆಂಗಳೂರು.** |
| 4. | ರಾಜ್ಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ವಿಶೇಷ ಉದ್ಯೋಗ ವಿನಿಮಯ ಕೇಂದ್ರ, **ಬೆಂಗಳೂರು.** |
| 5. | ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ(ತಾಂತ್ರಿಕ),**ಬೆಂಗಳೂರು.** |
| 6. | ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ (ಸಾಮಾನ್ಯ), **ಬೆಂಗಳೂರು.** |
| 7. | ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, **ಬಾಗಲಕೋಟೆ.** |
| 8. | ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, **ಬೆಳಗಾವಿ.** |
| 9. | ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, **ಬಳ್ಳಾರಿ.** |
| 10. | ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, **ಬೀದರ್.** |
| 11. | ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, **ವಿಜಯಪುರ.** |
| 12. | ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, **ಚಿಕ್ಕಮಗಳೂರು.** |
| 13. | ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, **ಚಿಕ್ಕಬಳ್ಳಾಪುರ.** |
| 14. | ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, **ಚಾಮರಾಜನಗರ.** |
| 15. | ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, **ಚಿತ್ರದುರ್ಗ.** |
| 16. | ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ,**ದಾವಣಗೆರೆ.** |
| 17. | ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, **ಕಲಬುರಗಿ.** |
| 18. | ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, **ಗದಗ.** |
| 19. | ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, **ಹಾಸನ.** |
| 20. | ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, **ಹಾವೇರಿ.** |
| 21. | ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, **ಹುಬ್ಬಳ್ಳಿ.** |
| 22. | ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, **ಕೋಲಾರ.** |
| 23. | ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, **ಕೊಪ್ಪಳ.** |
| 24. | ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, **ಮಡಿಕೇರಿ.** |
| 25. | ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, **ಮಂಡ್ಯ.** |
| 26. | ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, **ಮಂಗಳೂರು.** |
| 27. | ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, **ಮೈಸೂರು.** |
| 28. | ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, **ರಾಮನಗರ.** |
| 29. | ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, **ರಾಯಚೂರು.** |
| 30. | ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, **ಶಿವಮೊಗ್ಗ.** |
| 31. | ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ,**ತುಮಕೂರು.** |
| 32. | ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, **ಉಡುಪಿ.** |
| 33. | ಯೋಜನಾ ಉದ್ಯೋಗ ವಿನಿಮಯ ಕೇಂದ್ರ, **ಕಾರವಾರ.** |
| 34. | ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, **ಯಾದಗಿರಿ.** |
| 35. | ವಿಶ್ವವಿದ್ಯಾಲಯ ಉದ್ಯೋಗ ಮಾಹಿತಿ ಮತ್ತು ಮಾರ್ಗದರ್ಶನ ಕೇಂದ್ರ, **ಮೈಸೂರು.** |
| 36. | ವಿಶ್ವವಿದ್ಯಾಲಯ ಉದ್ಯೋಗ ಮಾಹಿತಿ ಮತ್ತು ಮಾರ್ಗದರ್ಶನ ಕೇಂದ್ರ, **ಧಾರವಾಡ.** |
| 37. | ವಿಶ್ವವಿದ್ಯಾಲಯ ಉದ್ಯೋಗ ಮಾಹಿತಿ ಮತ್ತು ಮಾರ್ಗದರ್ಶನ ಕೇಂದ್ರ, **ಮಂಗಳೂರು.** |
| 38. | ವಿಶ್ವವಿದ್ಯಾಲಯ ಉದ್ಯೋಗ ಮಾಹಿತಿ ಮತ್ತು ಮಾರ್ಗದರ್ಶನ ಕೇಂದ್ರ,**ಕಲಬುರಗಿ.** |
| 39. | ವಿಶ್ವವಿದ್ಯಾಲಯ ಉದ್ಯೋಗ ಮಾಹಿತಿ ಮತ್ತು ಮಾರ್ಗದರ್ಶನ ಕೇಂದ್ರ, **ಶಿವಮೊಗ್ಗ ಜಿಲ್ಲೆ.** |
| 40. | ವಿಶ್ವವಿದ್ಯಾಲಯ ಉದ್ಯೋಗ ಮಾಹಿತಿ ಮತ್ತು ಮಾರ್ಗದರ್ಶನ ಕೇಂದ್ರ, **ಬೆಂಗಳೂರು.** |

Padma. S

(ಪದ್ಮ.ಎಸ್)

ಸರ್ಕಾರದ ಅಧೀನ ಕಾರ್ಯದರ್ಶಿ

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು

ಜೀವನೋಪಾಯ ಇಲಾಖೆ